ಪಿಡಬ್ಲ್ಯೂಃ 2

ಇಂದು ದಿನಾಂಕಃ 10.07.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**ಪಾಟೀ ಸವಾಲುಃ** ಪ್ರತಿವಾದಿಯ ಪರ ಶ್ರೀ ಎನ್ ಎಸ್ ಹೆಚ್ ವಕೀಲರಿಂದಃ

ನಾನು ಸಲ್ಲಿಸಿರುವ ಸಾಕ್ಷ ಪ್ರಮಾಣ ಪತ್ರಕ್ಕೆ ಮಾಹಿತಿಯನ್ನು ನೀಡಿರುವುದಿಲ್ಲ. ಸಾಕ್ಷ್ಯ ಪ್ರಮಾಣ ಪತ್ರದಲ್ಲಿರುವ ವಿಚಾರವನ್ನು ನಾನು ಓದಿ ತಿಳಿದುಕೊಂಡಿರುವುದಿಲ್ಲ. ಆದರೆ ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಬರೆದಿರುವುದು ನಿಜವೇ ಇರುತ್ತದೆ. ದಾವಾ ಆಸ್ತಿ ನಮ್ಮ ಮನೆಯಿಂದ 100 ಮೀಟರ್ ಅಂತರದಲ್ಲಿ ಇರುತ್ತದೆ. ವಾದಿಯರನ್ನು ಕೆಳಗಿನಮನೆಯವರು ಎಂದು ಕರೆಯುತ್ತಾರೆ ಎಂದರೆ ಸರಿ. ದಾವಾ ಆಸ್ತಿಗಳು ಮರಿಯಮ್ಮ ಎಂಬುವವರ ಹೆಸನರಿಲ್ಲಿ ಇರುತ್ತದೆ. ಸದರಿ ಮರಿಯಮ್ಮನವರು ಈಗ ತೀರಿಕೊಂಡಿರುತ್ತಾರೆ. ಸದರಿ ಮರಿಯಮ್ಮನಿಗೆ ಶಿವಪ್ಪ ಎಂಬ ಮಗ ಇರುತ್ತಾರೆ ಎಂದರೆ ಸರಿ. ಸದರಿ ಪ್ರತಿವಾದಿಯರು ಸದರಿ ಶಿವಪ್ಪನ ಮಕ್ಕಳು ಆಗಿರುತ್ತಾರೆ ಎಂದರೆ ಸಾಕ್ಷಿಯು ಅವರು ಗುಂಡಗಟ್ಟಿಯಲ್ಲಿ ಇರುತ್ತಾರೆ ಯಾರು ಯಾರು ಎಂದು ನನಗೆ ಗೊತ್ತಿರುವುದಿಲ್ಲ ಎಂದು ನುಡಿದಿರುತ್ತಾರೆ. ಆ ರೀತಿ ನಾನು ಗೊತ್ತಿಲ್ಲ ಎಂದು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

2. ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ವಾದಿ ಮತ್ತು ಶಿವಪ್ಪ ರವರು ತೊಂಡಿಯಾಗಿ ಹಿಸ್ಸೆ ಮಾಡಿಕೊಂಡಿರುತ್ತಾರೆ ಎಂದು ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಹೇಳಿ ಬರೆಸಿರುವುದಿಲ್ಲ. ಪ್ರತಿವಾದಿಯರು ವಾದಿಯರ ಸ್ವಾದೀನತೆ ವಹಿವಾಟಿಗೆ ತೊಂದರೆ ನೀಡಿದರು ಎಂದು ನನ್ನ ಸಾಕ್ಷ ಪ್ರಮಾಣ ಪತ್ರದಲ್ಲಿ ಹೇಳಿ ಬರೆಸಿರುವುದಿಲ್ಲ. ದಾವಾ ಆಸ್ತಿ ಪ್ರತಿವಾದಿಯರ ಸ್ವಾದೀನದಲ್ಲಿ ಇದೆ ಎಂದರೆ ಸರಿಯಲ್ಲ. ಸಾಕ್ಷಿಯು ದಾವಾ ಆಸ್ತಿ ಮರಿಯವ್ವ ರವರ ಹೆಸರಿನಲ್ಲಿ ಇರುತ್ತದೆ ಎಂದು ನುಡಿದಿರುತ್ತಾರೆ. ಸದರಿ ಮರಿಯವ್ವ ಪೋತಿಯಾಗಿರುವ ಕಾರಣದಿಂದ ದಾವಾ ಆಸ್ತಿ ಶಿವಪ್ಪನವರ ಹೆಸರಿನಲ್ಲಿ ಖಾತೆ ಆಗಿದೆ ಎಂದರೆ ಸರಿ. ನಾನು ನ್ಯಾಯಾಲಯಕ್ಕೆ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.